All India Radio: Bangalore
Regional Bulletin In Kannada
04.11.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮೈಸೂರು ಪ್ರಧಾನ ಅಂಚೆ ಕಚೇರಿಯಲ್ಲಿ ಡಿಜಿಟಲ್ ಜೀವಮಾನ ಪತ್ರ ಅಭಿಯಾನಕ್ಕೆ ಚಾಲನೆ
- ಕಬ್ಬಿಗೆ ಸೂಕ್ತ ಬೆಲೆಗೆ ಒತ್ತಾಯಿಸಿ ಬೆಳಗಾವಿ ರೈತರ ಪ್ರತಿಭಟನೆ : ಸರ್ಕಾರ ಮಧ್ಯ ಪ್ರವೇಶಿಸುವಂತೆ ಬಿಜೆಪಿ ಆಗ್ರಹ
- ಬೆಂಗಳೂರಿನ ಸಂಚಾರ ದಟ್ಟಣೆ ನಿವಾರಣೆಗೆ ಪಾಲಿಕೆ, ಮೆಟ್ರೋ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಜಿಬಿಎ ಸೂಚನೆ
- ಶಾಸಕ ಹೆಚ್.ವೈ. ಮೇಟಿ ನಿಧನ ; ಮುಖ್ಯಮಂತ್ರಿ ಸಿದ್ದರಾಮಯ್ಯ ಅಂತಿಮ ದರ್ಶನ

<><><><>

ದೇಶಾದ್ಯಂತ ಹಮ್ಮಿಕೊಂಡಿರುವ ಡಿಜಿಟಲ್ ಜೀವಮಾನ ಪತ್ರ ಅಭಿಯಾನಕ್ಕೆ ಮೈಸೂರಿನಲ್ಲಿಂದು ಅಶೋಕ ರಸ್ತೆಯಲ್ಲಿರುವ ಪ್ರಧಾನ ಅಂಚೆ ಕಚೇರಿಯಲ್ಲಿ ಚಾಲನೆ ದೊರೆತಿದೆ. ಬಳಿಕ ಮಾತನಾಡಿದ ಪಿಂಚಣಿದಾರರ ಕಲ್ಯಾಣ ಇಲಾಖೆಯ ನಿರ್ದೇಶಕಿ ಎ.ಬಿ ದಿವ್ಯ ಮಾತನಾಡಿ, ಕೇಂದ್ರ ಸರ್ಕಾರ ಹಿರಿಯ ನಾಗರಿಕರಿಗೆ ನೇರವಾಗಲೆಂದು ಜಾರಿಗೆ ತಂದಿರುವ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಯೋಜನೆಯನ್ನು ದೇಶದೆಲ್ಲಡೆ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು. ಇದರಿಂದ ದೇಶದ ಹಿರಿಯ ನಾಗರಿಕರಿಗೆ ನೇರವಾಗಲಿದ್ದು, ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಧ್ವನಿ : ಎ.ಬಿ ದಿವ್ಯ (೩೦ ಸೆಕೆಂಡ್‌ಗಳು)

ಮೈಸೂರು ವಿಭಾಗದ ಅಂಚೆ ಕಚೇರಿಯ ವ್ಯವಸ್ಥಾಪಕ ಹರೀಶ್ ಮಾತನಾಡಿ, ಕೇಂದ್ರ ಸರ್ಕಾರ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಯೋಜನೆ ಮೂಲಕ ಹಿರಿಯ ನಾಗರಿಕರು ಪಡುತ್ತಿದ್ದ ಕಷ್ಟವನ್ನು ನಿವಾರಣೆ ಮಾಡಿದೆ ಎಂದರು.

<><><><>

ಬೆಳಗಾವಿ ಜಿಲ್ಲೆಯ ಗುರ್ಲಾಪುರದಲ್ಲಿ ಕಳೆದ ಕೆಲವು ದಿನಗಳಿಂದ ಕಬ್ಬು ಬೆಳೆಗೆ ಸಕ್ಕರೆ ಕಾರ್ಖಾನೆಗಳಿಂದ ಸೂಕ್ತ ಬೆಲೆ ನೀಡುವಂತೆ ಒತ್ತಾಯಿಸಿ ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುತ್ತಿದ್ದಾರೆ. ಸರ್ಕಾರ ಮಧ್ಯ ಪ್ರವೇಶಿಸಿ ರೈತರ ನ್ಯಾಯಯುತ ಬೇಡಿಕೆ ಈಡೇರಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾವಿರಾರು ಸಂಖ್ಯೆಯಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದು, ಸರ್ಕಾರ ಜವಾಬ್ದಾರಿಯಿಂದ ನುಣುಚಿಕೊಂಡಿದೆ ಎಂದು ಆರೋಪಿಸಿದ್ದಾರೆ. ಪ್ರಸ್ತುತ ರೈತರು ಸಂಕಷ್ಟದಲ್ಲಿ ಇದ್ದು, ರಾಜ್ಯದಲ್ಲಿ ೬ ಮಿಲಿಯನ್ ಟನ್ ಕಬ್ಬು ಅರೆಯಲಾಗುತ್ತದೆ. ಇದರಿಂದ ೫೫ ಸಾವಿರ ಕೋಟಿ ರೂಪಾಯಿ ಆದಾಯ ಸರ್ಕಾರಕ್ಕೆ ಬರುತ್ತಿದೆ. ಕೂಡಲೇ ಕಬ್ಬು ಬೆಳೆಗಾರರ ಸಮಸ್ಯೆಗೆ ಸ್ಪಂದಿಸಬೇಕೆಂದು ಬಿ.ವೈ ವಿಜಯೇಂದ್ರ ಆಗ್ರಹಿಸಿದ್ದಾರೆ.

<><><><>

ಬೆಂಗಳೂರಿನ ಬಳ್ಳಾರಿ ರಸ್ತೆಯ ಸಂಚಾರ ದಟ್ಟಣೆ ನಿವಾರಣೆಗೆ ಪಾಲಿಕೆ, ಮೆಟ್ರೋ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸಮನ್ವಯದಿಂದ ಪರಿಹಾರೋಪಾಯಗಳನ್ನು ರೂಪಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಉತ್ತರ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಬಳ್ಳಾರಿ ರಸ್ತೆಯ ಮೆಟ್ರೋ ಕಾಮಗಾರಿ ಪೂರ್ಣಗೊಂಡ ಪ್ರದೇಶಗಳಲ್ಲಿ ಇರುವ ಅವಶೇಷಗಳು ಮತ್ತು ಅನುಪಯುಕ್ತ ಕಬ್ಬಿಣ ವಸ್ತುಗಳನ್ನು ತೆರವುಗೊಳಿಸಿ ಸ್ವಚ್ಛತೆ ಕಾಪಾಡುವಂತೆ ಮೆಟ್ರೋ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹೆಬ್ಬಾಳ ಮೇಲ್ಸೇತುವೆಗೆ ಡಾಂಬರೀಕರಣ ಮಾಡಿ ವಾಹನ ಸಂಚಾರ ಸುಗಮಗೊಳಿಸಲು ನಿರ್ದೇಶನ ನೀಡಿದ್ದಾರೆ. ಸರ್ವೀಸ್ ರಸ್ತೆ ಮತ್ತು ಮುಖ್ಯ ರಸ್ತೆ ಸಂಪರ್ಕ ಕೇಂದ್ರಗಳಲ್ಲಿ ನಾಗರಿಕರ ಸೌಲಭ್ಯಕ್ಕಾಗಿ ಸೂಚನಾ ಫಲಕಗಳನ್ನು ಅಳವಡಿಸಲು ಎನ್‌ಎಚ್‌ಎಐ ಅಧಿಕಾರಿಗಳಿಗೆ ತಿಳಿಸಿದ್ದಾರೆ.

<><><><>

ಮಾಜಿ ಸಚಿವ ಹಾಗೂ ಹಾಲಿ ಶಾಸಕ ಹೆಚ್.ವೈ. ಮೇಟಿ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ನಿಧನ ಹೊಂದಿದ್ದಾರೆ. ಕಳೆದ ಕೆಲ ದಿನಗಳಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವರು ಭೇಟಿಯಾಗಿ ಆರೋಗ್ಯ ವಿಚಾರಿಸಿದ್ದರು. ನಾಳೆ ಅವರ ಹುಟ್ಟೂರಾದ ಬಾಗಲಕೋಟೆ ಜಿಲ್ಲೆಯ ತಿಮ್ಮಾಪುರದಲ್ಲಿ

ಅಂತ್ಯಕ್ರಿಯೆ ನಡೆಯಲಿದೆ. ಹೆಚ್.ವೈ. ಮೇಟಿಯವರ ನಿಧನ ವಾರ್ತೆ ನೋವುಂಟು ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ನಿಧನ ಸುದ್ದಿ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಹೆಚ್.ಸಿ. ಮಹದೇವಪ್ಪ ಆಸ್ಪತ್ರೆಗೆ ತೆರಳಿ ಅಂತಿಮ ದರ್ಶನ ಪಡೆದರು.

ಧ್ವನಿ : ಸಿದ್ದರಾಮಯ್ಯ

<><><><>

ಕಾಂಗ್ರೆಸ್ ಶಾಸಕ ಹೆಚ್.ವೈ ಮೇಟಿ ನಿಧನಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂತಾಪ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗರರೊಂದಿಗೆ ಮಾತನಾಡಿದ ಅವರು, ನಾಳೆ ನಿಗದಿಯಾಗಿದ್ದ 'ನೀರಿನ ಹೆಜ್ಜೆ' ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಮುಂದೂಡಲಾಗಿದೆ ಎಂದು ತಿಳಿಸಿದ್ದಾರೆ. ಮೇಟಿ ಅವರು ನನಗೆ ಬಹಳ ಆತ್ಮೀಯರು. ಸಿದ್ದರಾಮಯ್ಯ ಅವರ ಜೊತೆಯಲ್ಲೇ ಕಾಂಗ್ರೆಸ್ ಪಕ್ಷಕ್ಕೆ ಸೇರಿ ಶಾಸಕರಾಗಿ ಹಾಗೂ ಸಚಿವರಾಗಿ ಕಾರ್ಯ ನಿರ್ವಹಿಸಿದ್ದಾರೆ. ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಸದಸ್ಯರಿಗೆ ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.

<><><><>

ಕಲ್ಯಾಣ ಕರ್ನಾಟಕದ ಇಲ ಹಳ್ಳಿಗಳಲ್ಲಿ ಬಸ್ ಇಲ್ಲದೇ ಶಕ್ತಿಯೋಜನೆ ನಿರುಪಯುಕ್ತವಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರು ಟೆಕ್ ಶೃಂಗಸಭೆಗೆ ಮುನ್ನ ಗುಂಡಿ ಬಿದ್ದ ರಸ್ತೆಗಳನ್ನು ಸರಿಪಡಿಸುವಂತೆ ಒತ್ತಾಯಿಸಿದ್ದಾರೆ. ರಾಜ್ಯ ಸರ್ಕಾರ ಬೆಂಗಳೂರಿನ ಮೂಲಸೌಕರ್ಯವನ್ನು ಹಾಳು ಮಾಡಿದ್ದು, ಟ್ರಾಫಿಕ್ ಸಮಸ್ಯೆ ಉಲ್ಬಣಗೊಂಡಿದೆ. ಹೂಡಿಕೆದಾರರನ್ನು ಅವಮಾನ ಮಾಡಿ ಬೆಂಗಳೂರಿನ ವರ್ಚಸ್ಸಿಗೆ ಸರ್ಕಾರ ಧಕ್ಕೆ ತಂದಿದೆ ಎಂದು ದೂರಿದ್ದಾರೆ.

<><><><>

ಬಿಹಾರ ಚುನಾವಣೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿರುವ ಬಿಹಾರ ಸಮುದಾಯ ಸದಸ್ಯರಿಗೆ ತಮ್ಮ ಊರಿಗೆ ಪ್ರಯಾಣಿಸಲು ಹಾಗೂ ಮತ ಚಲಾಯಿಸಲು ಸಾಧ್ಯವಾಗುವಂತೆ ರಾಜ್ಯದ ಎಲ್ಲಾ ಕಂಪನಿಗಳು ಮತ್ತು ವ್ಯಾಪಾರ ಸಂಸ್ಥೆಗಳು ವೇತನ ಸಹಿತ ರಜೆ ನೀಡಬೇಕೆಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒತ್ತಾಯಿಸಿದ್ದಾರೆ. ಈ ಕುರಿತು ಪತ್ರ ಬರೆದಿರುವ ಅವರು,

ರಾಜ್ಯದ ವಿವಿಧ ಭಾಗಗಳಲ್ಲಿ ಹೆಚ್ಚಿನ ಸಂಖ್ಯೆಯ ಬಿಹಾರ ನಿವಾಸಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಕನಿಷ್ಠ ಮೂರು ದಿನಗಳ ವೇತನ ಸಹಿತ ರಜೆ ನೀಡುವಂತೆ ಅವರು ಮನವಿ ಮಾಡಿದ್ದಾರೆ.

<><><>

ಹಾವೇರಿ ಜಿಲ್ಲೆಯಲ್ಲಿ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ ಜಾರಿಯಲ್ಲಿದೆ. ಜಿಲ್ಲೆಯ ೧೯೮ ಹಳ್ಳಿಗಳಲ್ಲಿ ಮತ್ತು ೪೩ ವಾರ್ಡಗಳಲ್ಲಿ ಇದೇ ೧೯ರವರೆಗೆ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಚನ್ನಬಸಯ್ಯ ವಿರಕ್ತಮಠ ತಿಳಿಸಿದ್ದಾರೆ. ಈ ಅಭಿಯಾನವನ್ನು ಯಶಸ್ವಿಗೊಳಿಸಲು ಮತ್ತು ಕುಷ್ಠರೋಗ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಎಲ್ಲರು ಸಹಕರಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

<><><>

ಗದಗ ಜಿಲ್ಲೆಯಲ್ಲಿ ರಾಷ್ಟೀಯ ಜಾನುವಾರು ಆರೋಗ್ಯ ಮತ್ತು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ೮ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಹುಲಕೋಟಿಯಲ್ಲಿ ಚಾಲನೆ ನೀಡಿದರು. ಎಲ್ಲಾ ರೈತರು ಈ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಅವರು ಮನವಿ ಮಾಡಿದರು. ಪಶು ಸಂಗೋಪನಾ ಇಲಾಖೆಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ಈ ಸಂದರ್ಭದಲ್ಲಿ ಹಾಜರಿದ್ದರು.

<><><>

ವಿಜಯಪುರ ಜಿಲ್ಲೆಯಲ್ಲಿ ಪಶು ಲಸಿಕಾ ಅಭಿಯಾನ ಶುರುವಾಗಿದ್ದು ಡಿಸೆಂಬರ್ ೨ರವರೆಗೆ ನಡೆಯಲಿದೆ. ಜಾನುವಾರುಗಳ ಮಾಲೀಕರು ತಮ್ಮ ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸುವಂತೆ ಜಿಲ್ಲಾ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಅಶೋಕ ಗೊಣಸಗಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು ೨ ಲಕ್ಷದ ೭೮ ಸಾವಿರದ ೭೧೭ಕ್ಕೂ ಅಧಿಕ ಜಾನುವಾರುಗಳಿದ್ದು, ರೈತರ ಮನೆ ಬಾಗಿಲಿಗೆ ಹೋಗಿ ಲಸಿಕೆ ಹಾಕಲಾಗುತ್ತದೆ. ಗರ್ಭಧರಿಸಿದ ಹಾಗೂ ಹಾಲು ಕೊಡುವ ಜಾನುವಾರುಗಳಿಗೂ ತಪ್ಪದೇ ಲಸಿಕೆ ಹಾಕಿಸಬೇಕು. ಲಸಿಕೆ ಹಾಕುವಾಗ ಮಾಲೀಕರು ತಮ್ಮ ಹೆಸರು ವರ್ಗ, ಆಧಾರ ಸಂಖ್ಯೆ ಮತ್ತು ದೂರವಾಣಿ ಸಂಖ್ಯೆಯನ್ನು ನೀಡಿ ಸಹಕರಿಸುವಂತೆ ಅವರು ತಿಳಿಸಿದ್ದಾರೆ.

<><><><>

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮ ದಿನದ ಅಂಗವಾಗಿ ನಾಳೆ ಉತ್ತರಕನ್ನಡ ಜಿಲ್ಲೆಯ ಹೊನ್ನಾವರದಲ್ಲಿ ಆಯೋಜಿಸಿರುವ ರಾಷ್ಟ್ರೀಯ ಏಕತಾ ನಡಿಗೆ ಕಾರ್ಯಕ್ರಮದ ಪೂರ್ವಭಾವಿ ಸಭೆ ಹೊನ್ನಾವರದಲ್ಲಿ ನಡೆಯಿತು. ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ನೇತೃತ್ವದಲ್ಲಿ ನಾಳೆ ಏಕತಾ ನಡಿಗೆ ನಡೆಯಲಿದೆ. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಈ ಏಕತಾ ನಡಿಗೆ ಸಂಚರಿಸಲಿದೆ. ಈ ನಡಿಗೆಯಲ್ಲಿ ಎಲ್ಲಾ ಸಂಘ ಸಂಸ್ಥೆಗಳು, ವಿವಿಧ ಇಲಾಖೆಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ.

<><><><>

ಕೋಲಾರದಲ್ಲಿ ಗ್ರಾಮ ಪಂಚಾಯುತಿಗಳ ಮೂಲಕ ಬೀದಿನಾಯಿಗಳ ನಿಯಂತ್ರಣಕ್ಕೆ ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಪ್ರವೀಣ್ ಪಿ. ಬಾಗೇವಾಡಿ ತಿಳಿಸಿದ್ದಾರೆ. ಜಿಲ್ಲೆಯ ೧೫೪ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ೩೧ ಸಾವಿರ ಬೀದಿನಾಯಿಗಳಿವೆ ಎಂದು ಅಂದಾಜಿಸಲಾಗಿದೆ. ಈ ನಿಟ್ಟಿನಲ್ಲಿ ಕಟ್ಟುನಿಟ್ಟಾಗಿ ಬೀದಿನಾಯಿಗಳ ನಿಯಂತ್ರಣಕ್ಕೆ ಕ್ರಮವಹಿಸಲು ಗ್ರಾಮಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಬೀದಿನಾಯಿ ಕಡಿತಕ್ಕೆ ಗುರಿಯಾದವರಿಗೆ ಗ್ರಾಮಪಂಚಾಯತಿ ಪರಿಹಾರ ನೀಡುವಂತೆ ಅವರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>